ನಿ-72-77

# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನಪರಿಷತ್ತಿನ ಸದಸ್ಯರಾದ ಶ್ರೀ ನಸೀರ್ ಅಹ್ಮದ್ ಇವರ ನಿಯಮ –72 ರಡಿ ಸಲ್ಲಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.

**ವಿಷಯ:**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಬರುವ ನಿರ್ದೇಶನಾಲಯ, ನಿಗಮ ಹಾಗೂ ಉರ್ದು ಅಕಾಡೆಮಿಗಳಿಂದ ವಿವಿಧ ಯೋಜನೆ / ಕಾರ್ಯಕ್ರಮಗಳ ಮಂಜೂರಾತಿಗಾಗಿ ಕೋರಿ ಬಂದಿರುವ ಪ್ರಸ್ತಾವನೆಗಳು ಸಚಿವಾಲಯದ ಅಧಿಕಾರಿಗಳ ಹಂತದಲ್ಲಿಯೇ ಅನೇಕ ದಿನಗಳಿಂದ ಬಾಕಿಯಿರಿಸಿಕೊಂಡಿರುವುದರಿಂದ ಸದರಿ ಯೋಜನೆಗಳು ಅನುಷ್ಠಾನಗೊಳಿಸುವಲ್ಲಿ ವಿಳಂಬವಾಗುತ್ತಿರುವ ಕುರಿತು ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ನಿರ್ದೇಶನಾಲಯ, ನಿಗಮ ಹಾಗೂ ಉರ್ದು ಅಕಾಡೆಮಿಗಳಿಂದ ವಿವಿಧ ಯೋಜನೆಗಳು ಮತ್ತು ಕಾರ್ಯಕ್ರಮಗಳು ಪ್ರಗತಿಯಲ್ಲಿರುತ್ತವೆ. ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ ಆಯವ್ಯಯದಲ್ಲಿ ಮಂಜೂರಾದ ಅನುದಾನಕ್ಕನುಗುಣವಾಗಿ ಕ್ರಿಯಾ ಯೋಜನೆಯನ್ನು ತಯಾರಿಸಬೇಕಾಗಿರುತ್ತದೆ. ಕ್ರಿಯಾ ಯೋಜನೆ ಅನುಮೋದನೆಯಾದ ನಂತರ ಅನುದಾನ ಬಿಡುಗಡೆ ಮಾಡಲು ಆರ್ಥಿಕ ಇಲಾಖೆ/ ಯೋಜನಾ ಇಲಾಖೆಗಳ ಅಭಿಪ್ರಾಯ ಮತ್ತು ಸಹಮತಿಯನ್ನು ಪಡೆಯಬೇಕಾಗಿರುತ್ತದೆ.

ಸದರಿ ಇಲಾಖೆಗಳ ಸಹಮತಿಯನ್ನು ಪಡೆದು ನಿಯಮಾನುಸಾರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಯೋಜನೆಗಳು / ಕಾರ್ಯಕ್ರಮಗಳನ್ನು ಅನುದಾನ ಲಭ್ಯತೆಯನುಸಾರ ಮಂಜೂರಾತಿ ನೀಡಿ ಕಾಲಮಿತಿಯಲ್ಲಿಯೇ ಅನುಷ್ಠಾನಗೊಳಿಸಲು ಕ್ರಮ ವಹಿಸಲಾಗುತ್ತಿದೆ.

(ಶ್ರೀಮಂತ ಬಾಳಾಸಾಹೇಬ ಪಾಟೀಲ್)
ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು

ಸಂಖ್ಯೆ: MWD 47 LMQ 2021